ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹತ್ತನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 18ನೇ ಜುಲೈ, 2016

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ವಿತ್ತೀಯ ಕಾರ್ಯಕಲಾಪಗಳು

ಅ) **ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು)** ಅವರು 2016-17ನೇ ಸಾಲಿನ ಪೂರಕ ಅಂದಾಜುಗಳನ್ನು (ಮೊದಲನೇ ಕಂತು) ಮಂಡಿಸುವುದು.

ಆ) 2016-17ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಬೇಡಿಕೆ ಸಂಖ್ಯೆ	**ಬೇಡಿಕೆಯ ಹೆಸರು**
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
14	ಕಂದಾಯ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
16	ವಸತಿ
01	ಕೃಷಿ ಮತ್ತು ತೋಟಗಾರಿಕೆ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
09	ಸಹಕಾರ
24	ಇಂಧನ
21	ಜಲಸಂಪನ್ಮೂಲ
18	ವಾಣಿಜ್ಯ ಮತ್ತು ಕೈಗಾರಿಕೆ
23	ಕಾರ್ಮಿಕ
05	ಒಳಾಡಳಿತ (ಗೃಹ) ಮತ್ತು ಸಾರಿಗೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
20	ಲೋಕೋಪಯೋಗಿ
13	ಆಹಾರ ಮತ್ತು ನಾಗರಿಕ ಸರಬರಾಜು
10	ಸಮಾಜ ಕಲ್ಯಾಣ
19	ನಗರಾಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ

...2.

22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
17	ಶಿಕ್ಷಣ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
15	ಮಾಹಿತಿ ತಂತ್ರಜ್ಞಾನ
06	ಮೂಲಭೂತ ಸೌಕರ್ಯ ಅಭಿವೃದ್ಧಿ
03	ಆರ್ಥಿಕ (ಅಬಕಾರಿ)
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಇ) 2016-17ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹತ್ತನೇ ಪಟ್ಟಿ

3. ವರದಿಗಳನ್ನೊಪ್ಪಿಸುವುದು

1. **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ** (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಕರ್ನಾಟಕ ವಿಧಾನ ಸಭೆಯ ಅರ್ಜಿಗಳ ಸಮಿತಿ) ಅವರು- 2015-16ನೇ ಸಾಲಿನ ಅರ್ಜಿಗಳ ಸಮಿತಿಯ 21ನೇ ವರದಿಯನ್ನೊಪ್ಪಿಸುವುದು.

2. **ಶ್ರೀ ಕೆ.ಎನ್.ರಾಜಣ್ಣ** (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು- 2015-16ನೇ ಸಾಲಿನ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 14ನೇ, 15ನೇ, 16ನೇ, 17ನೇ, 18ನೇ ಮತ್ತು 19ನೇ ವರದಿಗಳನ್ನು ಒಪ್ಪಿಸುವುದು.

3. **ಶ್ರೀ ಜೆ.ಆರ್. ಲೋಬೊ** (ಸದಸ್ಯರು, ಕರ್ನಾಟಕ ವಿಧಾನ ಸಭೆಯ ಹಕ್ಕುಬಾಧ್ಯತೆಗಳ ಸಮಿತಿ) ಅವರು- 2015-16ನೇ ಸಾಲಿನ ಹಕ್ಕುಬಾಧ್ಯತೆಗಳ ಸಮಿತಿಯ 1ನೇ ಮತ್ತು 2ನೇ ವರದಿಗಳನ್ನು ಒಪ್ಪಿಸುವುದು.

4. **ಡಾ॥ ಎ.ಬಿ.ಮಾಲಕರಡ್ಡಿ** (ಅಧ್ಯಕ್ಷರು, ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿ) ಅವರು- ಅಧೀನ ಶಾಸನ ರಚನಾ ಸಮಿತಿಯ 44ನೇ ವರದಿಯನ್ನು ಒಪ್ಪಿಸುವುದು.

....3.

4.ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಎಂ.ಟಿ.ಕೃಷ್ಣಪ್ಪ, ಪಿ.ಆರ್.ಸುಧಾಕರ್‌ಲಾಲ್ ಮತ್ತು ಕೆ.ಎಸ್. ಪುಟ್ಟಣ್ಣಯ್ಯ– ಇವರುಗಳು ರಾಜ್ಯದಲ್ಲಿ ತೆಂಗಿನ ಮತ್ತು ಅಡಿಕೆ ಬೆಲೆ ಕುಸಿದಿರುವುದಲ್ಲದೆ ಆ ಫಸಲು, ರೋಗಕ್ಕೆ ತುತ್ತಾಗಿರುವುದರಿಂದ, ತೆಂಗು ಮತ್ತು ಅಡಿಕೆ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ಶ್ರೀ ಎನ್.ಹೆಚ್.ಕೋನರಡ್ಡಿ ರವರು ಮಹಾದಾಯಿ ಕಳಸಾ ಬಂಡೂರಿ ನಾಲಾ ಜೋಡಣೆಯ ಯೋಜನೆಯನ್ನು ತ್ವರಿತವಾಗಿ ಜಾರಿಗೆ ತರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. ಶ್ರೀಯುತರುಗಳಾದ ವೈ.ಎ. ನಾರಾಯಣಸ್ವಾಮಿ, ಎಸ್. ಮುನಿರಾಜು ಮತ್ತು ಎಲ್.ಎ. ರವಿಸುಬ್ರಮಣ್ಯ ಇವರುಗಳು– ಹೆಬ್ಬಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ರಾಜ್‌ಮಹಲ್ ವಿಲಾಸ್ ಬಡಾವಣೆ ನಿರ್ಮಿಸಲು ನೂರಾರು ಎಕರೆ ಜಮೀನು ಸ್ವಾಧೀನ ಪ್ರಕ್ರಿಯೆಯಲ್ಲಿ ಈಗಾಗಲೇ ಮೂಲ ಮಾಲೀಕರಿಂದ ಜಮೀನು ಖರೀದಿಸಿ ಹಲವಾರು ವರ್ಷಗಳಿಂದ ಮನೆಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿರುವವರನ್ನು ಒಕ್ಕಲೆಬ್ಬಿಸುತ್ತಿರುವುದರಿಂದ ಸಾರ್ವಜನಿಕರು ಬಹಳ ಸಂಕಷ್ಟದಲ್ಲಿರುವ ಹಿನ್ನೆಲೆಯಲ್ಲಿ, ಮಾನವೀಯ ನೆಲೆಗಟ್ಟಿನಡಿ ಬಹುತೇಕ ವರ್ಷಗಳಿಂದ ಅಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಬಿಟ್ಟು ಕೊಡುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

01. ಶ್ರೀ ಬಸವರಾಜ ನೀಲಪ್ಪ ಶಿವಣ್ಣವರ ಇವರು– ಬ್ಯಾಡಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಣೇಬೆನ್ನೂರು ತಾಲ್ಲೂಕಿನ ಗುಡ್ಡದ ಆನ್ವೇರಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ತುಂಗಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆ ಕಿ.ಮೀ.176, 183 ಮತ್ತು 187ರಲ್ಲಿ ನೀರಿನ ಬಸಿಯುವಿಕೆಯಿಂದಾಗಿ ರೈತರ ಜಮೀನಿನಲ್ಲಿ ಬೆಳೆದ ವಿವಿಧ ಬೆಳೆಗಳಿಗೆ ಹಾನಿ ಉಂಟಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

....4.

02. **ಶ್ರೀ ಜಿ.ಟಿ.ದೇವೇಗೌಡ** ಇವರು- ಕಾವೇರಿ ನೀರಾವರಿ ನಿಗಮದ ವತಿಯಿಂದ ಯಡಿಯೂರು ವಿಭಾಗದಲ್ಲಿ ಕಳೆದ ಒಂದು ತಿಂಗಳಿನಿಂದ ಟೆಂಡರ್‌ನ ತಾಂತ್ರಿಕ ಬಿಡ್ ಮತ್ತು ಆರ್ಥಿಕ ಬಿಡ್‌ನ್ನು ಕಾನೂನು ಬಾಹಿರವಾಗಿ ನೀಡುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ವಿಷಯದ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

03. **ಶ್ರೀ ಎಂ.ಟಿ. ಕೃಷ್ಣಪ್ಪ** ಇವರು- ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿರುವುದರಿಂದ ಸದರಿ ಟೆಂಡರ್ ಪ್ರಕ್ರಿಯೆಯನ್ನು ರದ್ದುಪಡಿಸಿ ತಾಲ್ಲೂಕುವಾರು ರಸ್ತೆಗಳ ಕಾಮಗಾರಿಗಳನ್ನು ಕ್ರೋಡೀಕರಿಸಿ ಮರು ಟೆಂಡರ್ ಕರೆಯುವ ವಿಷಯದ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

04. **ಶ್ರೀ ಹೆಚ್.ಎಸ್. ಪ್ರಕಾಶ್** ಇವರು - ಹಾಸನ ನಗರ ಹಾಗೂ ಜಿಲ್ಲೆಯ ಹಲವಾರು ತಾಲ್ಲೂಕುಗಳ 05 ಕಿ.ಮೀ. ವ್ಯಾಪ್ತಿಯಲ್ಲಿ ರೈತರ ಜಮೀನುಗಳನ್ನು ಅನ್ಯಸಂಕ್ರಮಣ ಮಾಡಿ ನಿವೇಶನಗಳನ್ನಾಗಿ ಮಾರ್ಪಡಿಸಿ ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ವಂಚಿಸುವ ಮೂಲಕ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟಕ್ಕೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

05. **ಶ್ರೀ ಕೆ.ಎಂ. ತಿಮ್ಮರಾಯಪ್ಪ** ಇವರು - ಪಾವಗಡ ತಾಲ್ಲೂಕಿನ ವೈ.ಎನ್.ಹೊಸಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸೂಲನಾಯಕನಹಳ್ಳಿಯ ಸಾಮೇಲು ಬಿನ್ ಬಾವನ್ನ ಮತ್ತು ಇತರರ ವಿರುದ್ಧ ದರೋಡೆ ಸಂಚು ಪ್ರಕರಣದಲ್ಲಿ ಸುಳ್ಳು ಮೊಕದ್ದಮೆ ದಾಖಲಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

06. **ಶ್ರೀ ನಾರಾಯಣಗೌಡ** ಇವರು - ಕಾವೇರಿ ನೀರಾವರಿ ನಿಗಮದವರು ಹೇಮಾವತಿ ಎಡದಂಡೆ ಮತ್ತು ಬಲದಂಡೆ ವ್ಯಾಪ್ತಿಯ ಉಪನಾಲೆಗಳಲ್ಲಿ ಸಮರ್ಪಕವಾಗಿ ನೀರನ್ನು ಹರಿಸದೆ ರೈತರ ಬೆಳೆಗಳು ಹಾಳಾಗಿ ಕೋಟ್ಯಾಂತರ ರೂಪಾಯಿಗಳ ನಷ್ಟವುಂಟಾಗಿರುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

07. **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ** ಇವರು - ವಯೋವೃದ್ಧರ ಕಲ್ಯಾಣ ಯೋಜನೆಗಳಡಿ ಹೋಬಳಿ/ತಾಲ್ಲೂಕು ಮಟ್ಟದಲ್ಲಿ ಆರೈಕೆ ಕೇಂದ್ರಗಳನ್ನು ಸ್ಥಾಪನೆ ಮಾಡಿ ವೃದ್ಧರ ಆರೈಕೆ ಮತ್ತು ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಯೋಜನೆಯನ್ನು ರೂಪಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://www.kla.kar.nic.in/assembly/lob/lob.htm)